Akashvani: Bangalore
National Bulletin In Kannada
13.11.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
13.11.2026: 13.10hrs
****

ಮುಖ್ಯಾಂಶಗಳು :

1. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ೨೦೨೫ನೇ ಸಾಲಿನ ರಾಷ್ಟ್ರೀಯ ಕ್ರೀಡಾ ಪ್ರಶಸ್ತಿ ಪ್ರದಾನ
2. ಬೆಂಗಳೂರಿನಲ್ಲಿ ನಮ್ಮ ಮೆಟ್ರೊ ಗುಲಾಬಿ ಮಾರ್ಗ ಲೋಕಾರ್ಪಣೆಗೊಳಿಸಿದ ಪ್ರಧಾನಿ ನರೇಂದ್ರ ಮೋದಿ
3. ಉಡುಪಿಯಲ್ಲಿ ಎಫ್‌ಎಂ ಟ್ರಾನ್ಸ್‌ಮೀಟರ್ ಉದ್ಘಾಟಿಸಿದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
4. ಏಕದಿನ ಕ್ರಿಕೆಟ್: ಭಾರತಕ್ಕೆ ೩೩೪ ರನ್‌ಗಳ ಗುರಿ ನೀಡಿದ ನ್ಯೂಜಿಲೆಂಡ್

****

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ಇಂದು ೨೦೨೫ನೇ ಸಾಲಿನ ರಾಷ್ಟ್ರೀಯ ಕ್ರೀಡಾ ಪ್ರಶಸ್ತಿಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಿದರು. ಈ ವೇಳೆ ಮಹಿಳಾ ಬ್ಯಾಡ್ಮಿಂಟನ್ ಡಬಲ್ಸ್ ಜೋಡಿಯಾದ ತ್ರೀಸಾ ಜಾಲಿ ಮತ್ತು ಪುಲ್ಲೇಲ ಗಾಯತ್ರಿ ಗೋಪಿಚಂದ್ ಸೇರಿದಂತೆ ವಿವಿಧ ಕ್ರೀಡಾ ವಿಭಾಗಗಳ ೧೫ ಕ್ರೀಡಾಪಟುಗಳಿಗೆ ಕ್ರೀಡಾ ಕ್ಷೇತ್ರದಲ್ಲಿನ ಅತ್ಯುತ್ತಮ ಸಾಧನೆಗಾಗಿ ಅರ್ಜುನ ಪ್ರಶಸ್ತಿ ಪ್ರದಾನ ಮಾಡಿದರು. ಹಿರಿಯ ಫುಟ್ಬಾಲ್ ಆಟಗಾರ ಇಸಯ್ಯ ಅರುಮೈನಾಯಗಂ ಅವರಿಗೆ ಜೀವಮಾನ ಸಾಧನೆಗಾಗಿ ಅರ್ಜುನ ಪ್ರಶಸ್ತಿ ನೀಡಲಾಯಿತು. ಅಥ್ಲೆಟಿಕ್ಸ್ ತರಬೇತುದಾರ ಪರ್ವೀರ್ ಸಿಂಗ್, ಬಾಕ್ಸಿಂಗ್ ತರಬೇತುದಾರ ಭೋಟೆ ಲಾಲ್ ಯಾದವ್ ಮತ್ತು ಶೂಟಿಂಗ್ ತರಬೇತುದಾರ ನೇಹಾ ನಂದಕುಮಾರ್ ಚವಾಣ್ ಅವರಿಗೆ ದ್ರೋಣಾಚಾರ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಇದೇ ವೇಳೆ, ಪುಣೆಯ ಸೇನಾ ಪ್ಯಾರಾಲಿಂಪಿಕ್ ನೋಡ್‌ಗೆ ರಾಷ್ಟ್ರೀಯ ಖೇಲ್ ಪ್ರೋತ್ಸಾಹನ್ ಪುರಸ್ಕಾರವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಿದರು.

****

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಂಗಳೂರಿನಲ್ಲಿ ನಮ್ಮ ಮೆಟ್ರೋ ಗುಲಾಬಿ ಮಾರ್ಗವನ್ನು ಲೋಕಾರ್ಪಣೆಗೊಳಿಸಿದರು. ಬಳಿಕ ತಾವರೆಕೆರೆಯಿಂದ ಐಐಎಂ ಬೆಂಗಳೂರು ಮೆಟ್ರೋ ನಿಲ್ದಾಣದ ವರೆಗೆ ನಮ್ಮ ಮೆಟ್ರೋ ರೈಲಿನಲ್ಲಿ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ರಾಜ್ಯಪಾಲರಾದ ಡಾ. ಸುಧಾ ಯಾದವ್ ಅವರೊಂದಿಗೆ ಪ್ರಯಾಣಿಸಿದರು. ಇದಕ್ಕೂ ಮುನ್ನ ಪ್ರಧಾನಿ ಅವರು ಜಿಗಣಿ ಬಳಿಯ ಪ್ರಶಾಂತಿ ಕುಠೀರದ ಸ್ವರ್ಣ ಮಹೋತ್ಸವ ಸಮಾರಂಭದಲ್ಲಿ ಪಾಲ್ಗೊಂಡರು. ಈ ವೇಳೆ ಕೇರಳಂ ನ ತಿರುವನಂತಪುರದಲ್ಲಿ ನೂತನ ಎಸ್-ವ್ಯಾಸ್ ವಿಶ್ವವಿದ್ಯಾಲಯದ ಕ್ಯಾಂಪಸ್‌ಗೆ ವರ್ಚುಯಲ್ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಕಾರ್ಯಕ್ರಮ ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮಾತನಾಡಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ(೩೪ ಸೆಕೆಂಡ್ಸ್)

ಬಳಿಕ ಪ್ರಧಾನಿ ನರೇಂದ್ರ ಮೋದಿ ಅವರು ೧೫ ಸಾವಿರದ ೬೦೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲಿದ್ದಾರೆ. ಇದರಲ್ಲಿ ಕೊಪ್ಪಳ ಹಾಗೂ ಗದಗದಲ್ಲಿ ನವೀಕರಿಸಬಹುದಾದ ಇಂಧನ ವಲಯ ಸಂಯೋಜನೆಗಾಗಿ ವಿದ್ಯುತ್ ಪ್ರಸರಣ ಯೋಜನೆ, ಬೀದರ್‌ನಲ್ಲಿ ಸೌರಶಕ್ತಿ ವಲಯದ ವಿದ್ಯುತ್ ಪ್ರಸರಣ ಯೋಜನೆ, ದ್ವಿಪಥೀಕರಿಸಿದ ಬಾಗಲಕೋಟೆ-ವಂದಾಲ ನಡುವಿನ ರೈಲು ಮಾರ್ಗ, ಸಕಲೇಶಪುರ-ಸುಬ್ರಹ್ಮಣ್ಯ ರಸ್ತೆ ನಡುವೆ ೫೫ ಕಿ.ಮೀ ವಿದ್ಯುದೀಕರಣ, ಬೆಂಗಳೂರಿನ ಎಂಆರ್‌ಪಿಎಲ್ ಸಂಸ್ಥೆಯ ದೇವನಗೊಂತಿ ಮಾರ್ಕೆಟಿಂಗ್ ಟರ್ಮಿನಲ್, ಮಂಗಳೂರಿನ ಹೆಚ್‌ಪಿಸಿಎಲ್ ಸಂಸ್ಥೆಯ ೮೦ ಟಿಎಂಟಿ ಎಲ್‌ಪಿಜಿ ಕ್ಯಾವೆರ್ನ್, ದಾವಣಗೆರೆ, ಚಿತ್ರದುರ್ಗ ಮತ್ತು ಬಳ್ಳಾರಿಯಲ್ಲಿ ನವೀಕರಿಸಬಹುದಾದ ಇಂಧನ ವಲಯಗಳ ಸಂಯೋಜನೆಗಾಗಿ ವಿದ್ಯುತ್ ಪ್ರಸರಣ ಯೋಜನೆ, ದಾವಣೆಗೆರೆ ಮತ್ತು ಬಳ್ಳಾರಿಯಲ್ಲಿ ನವೀಕರಿಸಬಹುದಾದ ಇಂಧನದ ಹೆಚ್ಚುವರಿ ಸಾಮರ್ಥ್ಯದ ಸಂಯೋಜನೆಗಾಗಿ ವಿದ್ಯುತ್ ಪ್ರಸರಣ ಯೋಜನೆಯ ಬಲವರ್ಧನೆ, ಬೆಂಗಳೂರಿನ ಗೇಲ್ ಸಂಸ್ಥೆಯ ಸಂಕ್ಷೇಪಿತ ಜೈವಿಕ ಅನಿಲ ಸ್ಥಾವರ ಸೇರಿವೆ. ಬಳಿಕ ಪ್ರಧಾನಿ ಅವರು ಬೆಂಗಳೂರು - ಮಂಗಳೂರು - ಮಡಗಾಂವ್ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ವರ್ಚುವಲ್ ಮೂಲಕ ಚಾಲನೆ ನೀಡಲಿದ್ದಾರೆ. ಇದೇ ವೇಳೆ ಅಮೃತ್ ಭಾರತ್ ನಿಲ್ದಾಣ ಯೋಜನೆಯಡಿ ಪುನರಾಭಿವೃದ್ಧಿ ಮಾಡಿದ ಚಾಮರಾಜನಗರ, ಚಿಕ್ಕಮಗಳೂರು, ಸಕಲೇಶಪುರ, ಸುಬ್ರಹ್ಮಣ್ಯ ರಸ್ತೆ ರೈಲು ನಿಲ್ದಾಣಗಳನ್ನು ಉದ್ಘಾಟಿಸಲಿದ್ದಾರೆ. ಬಳಿಕ ಪ್ರಧಾನಿ ನರೇಂದ್ರ ಮೋದಿ ಅವರು, ಮೈಸೂರಿಗೆ ಪ್ರಯಾಣಿಸಲಿದ್ದು, ಸಂಜೆ ಕಾಸ್ಮೋಸ್ ಮೈಸೂರು ಖಗೋಳ ತಾರಾಲಯವನ್ನು ಉದ್ಘಾಟಿಸಲಿದ್ದಾರೆ.

****

ಕೊಂಕಣ ಪ್ರದೇಶ ಮತ್ತು ಕರಾವಳಿ ಕರ್ನಾಟಕದಲ್ಲಿ ರೈಲ್ವೆ ಮೂಲಸೌಕರ್ಯವನ್ನು ಬಲಪಡಿಸುವ ಕೇಂದ್ರ ಸರ್ಕಾರದ ಬದ್ಧತೆಯನ್ನು ರೈಲ್ವೆ ಹಾಗೂ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಪುನರುಚ್ಚರಿಸಿದ್ದಾರೆ. ಉಡುಪಿ ಆಕಾಶವಾಣಿಯಲ್ಲಿ ಇಂದು ನೂತನ ೧-ಕಿಲೋವ್ಯಾಟ್ ಎಫ್‌ಎಂ ಟ್ರಾನ್ಸ್‌ಮಿಟರ್ ಉದ್ಘಾಟಿಸಿ ಮಾತನಾಡಿದ ಸಚಿವರು, ಸಂಪೂರ್ಣ ಕೊಂಕಣ ರೈಲ್ವೆ ಮಾರ್ಗವನ್ನು ದ್ವಿಪಥಗೊಳಿಸುವುದು ಅತ್ಯಂತ ಆದ್ಯತೆಯ ವಿಷಯವಾಗಿದ್ದು, ಇದನ್ನು ಹಂತ ಹಂತವಾಗಿ ಕೈಗೊಳ್ಳಲಾಗುವುದು ಎಂದು ತಿಳಿಸಿದರು.ಕರಾವಳಿ ಭಾಗದ ಅಭಿವೃದ್ಧಿಗೆ ಅಗತ್ಯವಾದ ಪ್ರಮುಖ ಮೂಲಸೌಕರ್ಯ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಅವರು ನಿರಂತರವಾಗಿ ಅನುಮೋದನೆ ನೀಡುತ್ತಿದ್ದಾರೆ. ಈ ಸಂಪೂರ್ಣ ಪ್ರದೇಶಕ್ಕಾಗಿ ರೈಲ್ವೆ ಇಲಾಖೆಯು ಒಂದು ಸಮಗ್ರ ಮಾಸ್ಟರ್ ಪ್ಲಾನ್ ಸಿದ್ಧಪಡಿಸಲಿದೆ ಎಂದು ಘೋಷಿಸಿದರು. ಈಗಾಗಲೇ ೧೦ ರಸ್ತೆ ಮೇಲ್ಸೇತುವೆಗಳು, ಎರಡು ಸುರಂಗಗಳು ಮತ್ತು ಹಲವಾರು ರೈಲ್ವೆ ನಿಲ್ದಾಣಗಳ ಉನ್ನತೀಕರಣದ ಕೆಲಸಗಳು ಪ್ರಾರಂಭವಾಗಿವೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು.

ಧ್ವನಿ: ಸಚಿವ ಅಶ್ವಿನಿ ವೈಷ್ಣವ್(೩೦ ಸೆಕೆಂಡ್ಸ್)

ಬಳಿಕ ರೈಲ್ವೆ ಸಚಿವರು ಮಂಗಳೂರು ರೈಲು ನಿಲ್ದಾಣದಲ್ಲಿ ಬೆಂಗಳೂರು-ಮಂಗಳೂರು-ಮಡಗಾಂವ್ ವಂದೇ ಭಾರತ್ ರೈಲಿಗೆ ಹಸಿರು ನಿಶಾನೆ ತೋರಿದರು. ಈ ವೇಳೆ ಸಂಸದಾರದ ಕೋಟಾ ಶ್ರೀನಿವಾಸ್ ಪೂಜಾರಿ, ಕ್ಯಾಪ್ಟನ್ ಬ್ರಿಜೇಶ್ ಚೌಟಾ ಹಾಗೂ ಆಕಾಶವಾಣಿ ಮತ್ತು ಎನ್‌ಎಸ್‌ಡಿ ಪ್ರಧಾನ ನಿರ್ದೇಶಕರಾದ ರಾಜೀವ್ ಜೈನ್ ಉಪಸ್ಥಿತರಿದ್ದರು.

****

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಆಂಧ್ರ ಪ್ರದೇಶದ ವಿಶಾಖಪಟ್ಟಣಂಗೆ ಭೇಟಿ ನೀಡಲಿದ್ದು, ೩೧ನೇ ಆವೃತ್ತಿಯ ಸಿಐಐ ಪಾಲುದಾರಿಕೆ ಶೃಂಗಸಭೆಯ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಭಾಷಣ ಮಾಡಲಿದ್ದಾರೆ. ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ, ಆಂಧ್ರ ಪ್ರದೇಶ ಸರ್ಕಾರ ಹಾಗೂ ಭಾರತೀಯ ಕೈಗಾರಿಕಾ ಒಕ್ಕೂಟ ಜಂಟಿಯಾಗಿ ಈ ಶೃಂಗಸಭೆಯನ್ನು ಆಯೋಜಿಸಿವೆ. ವಿವಿಧ ದೇಶಗಳ ನೀತಿ ನಿರೂಪಕರು, ಸಚಿವರು, ಉದ್ಯಮ ನಾಯಕರು ಮತ್ತು ರಾಜತಾಂತ್ರಿಕರು ಶೃಂಗಸಭೆಯಲ್ಲಿ ಭಾಗವಹಿಸಿದ್ದಾರೆ. ಜಾಗತಿಕ ಹೂಡಿಕೆ ಸಹಭಾಗಿತ್ವವನ್ನು ಬಲಪಡಿಸುವುದು ಹಾಗೂ ವಿಕಸಿತ ಭಾರತ ಗುರಿ ಸಾಧನೆಗೆ ಬೆಂಬಲ ನೀಡುವುದು ಈ ಶೃಂಗಸಭೆಯ ಪ್ರಮುಖ ಉದ್ದೇಶವಾಗಿದೆ.

****

ಕ್ಷಯರೋಗ ವಿರುದ್ಧದ ಹೋರಾಟದಲ್ಲಿ ಭಾರತ ಮಹತ್ವದ ಮೈಲಿಗಲ್ಲು ಸಾಧಿಸಿದೆ. ೨೦೧೫ ರಿಂದ ಕ್ಷಯರೋಗ ಸಂಬಂಧಿತ ಮರಣ ಶೇಕಡ ೩೮ ರಷ್ಟು ತಗ್ಗಿದೆ. ಜಾಗತಿಕವಾಗಿ ಈ ಪ್ರಮಾಣ ಶೇಕಡ ೩೫ ರಷ್ಟು ತಗ್ಗಿದ್ದು, ಇದಕ್ಕೆ ಹೋಲಿಸದರೆ, ಭಾರತ ಅತ್ಯುತ್ತಮ ಪ್ರಗತಿ ದಾಖಲಿಸಿದೆ. ಇದು ರೋಗವನ್ನು ನಿರ್ಮೂಲನೆ ಮಾಡುವತ್ತ ದೇಶದ ನಿರಂತರ ಪ್ರಯತ್ನಗಳನ್ನು ಪ್ರತಿಬಿಂಬಿಸುತ್ತದೆ.ವಿಶ್ವ ಆರೋಗ್ಯ ಸಂಸ್ಥೆಯ ಜಾಗತಿಕ ಕ್ಷಯರೋಗ ವರದಿ ೨೦೨೬ ರ ಪ್ರಕಾರ, ಕ್ಷಯರೋಗದಿಂದ ಬಳಲುತ್ತಿರುವ ರೋಗಿಗಳಲ್ಲಿ ಭಾರತ ಶೇಕಡ ೯೪ ರಷ್ಟು ಚಿಕಿತ್ಸೆಯ ಯಶಸ್ಸಿನ ಪ್ರಮಾಣವನ್ನು ಸಾಧಿಸಿದೆ.

****

ಉಕ್ರೇನ್ ಸಂಘರ್ಷಕ್ಕೆ ಸಂಬಂಧಿಸಿದ ಮುಂದಿನ ಸುತ್ತಿನ ಶಾಂತಿ ಮಾತುಕತೆಯಲ್ಲಿ ಯುರೋಪ್ ಪ್ರತಿನಿಧಿಗಳು ಭಾಗವಹಿಸಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಸಮ್ಮತಿ ಸೂಚಿಸಿದ್ದಾರೆ. ಪುಟಿನ್ ಅವರನ್ನು ಕ್ರೆಮ್ಲಿನ್‌ನಲ್ಲಿ ಭೇಟಿಯಾದ ಬಳಿಕ ಅಮೆರಿಕದ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ಈ ವಿಷಯವನ್ನು ಸುದ್ದಿಗಾರರಿಗೆ ತಿಳಿಸಿದ್ದಾರೆ. ಮುಂದಿನ ಸುತ್ತಿನ ಮಾತುಕತೆಯಲ್ಲಿ ಯುರೋಪ್‌ಗೆ ಸ್ಥಾನ ಕಲ್ಪಿಸುವ ನಿರ್ಧಾರ ಮಹತ್ವದ ಬೆಳವಣಿಗೆಯಾಗಿದೆ ಎಂದು ವಿಟ್ಕಾಫ್ ಹೇಳಿದ್ದಾರೆ.

****

ನ್ಯೂಜಿಲೆಂಡ್‌ನ ಮೌಂಟ್ ಮೌಂಗನುಯಿಯಲ್ಲಿ ಇಂದು ನಡೆಯುತ್ತಿರುವ ನಾಲ್ಕನೇ ಏಕದಿನ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯದಲ್ಲಿ ಭಾರತದ ವಿರುದ್ಧ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್, ನಿಗದಿತ ೫೦ ಓವರ್‌ಗಳಲ್ಲಿ ೩೩೩ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಗೆಲುವಿನ ಗುರಿ ಬೆನ್ನತ್ತಿರುವ ಭಾರತ, ಇತ್ತೀಚಿನ ವರದಿ ಬಂದಾಗ, ೧೮.೫ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೫೭ ರನ್ ಮಾಡಿ ಆಡುತ್ತಿದೆ. ಐದು ಪಂದ್ಯಗಳ ಸರಣಿಯಲ್ಲಿ ಭಾರತ ತಂಡ ೨-೦ ಅಂತರದ ಅಜೇಯ ಮುನ್ನಡೆ ಸಾಧಿಸಿದೆ. ಹ್ಯಾಮಿಲ್ಟನ್‌ನಲ್ಲಿ ನಡೆಯಬೇಕಿದ್ದ ಮೂರನೇ ಏಕದಿನ ಪಂದ್ಯ ಮಳೆಯ ಕಾರಣದಿಂದಾಗಿ ರದ್ದುಗೊಂಡಿತ್ತು.

******END*****